ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/513/ಎಸಿಎಂ(2)/2017-18

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:23-05-2018.

**-:: ಪ್ರಕಟಣೆ ::-**

**ವಿಷಯ:-** ಅಭ್ಯರ್ಥಿಗಳು ಪ್ರಥಮ ಡಿಪ್ಲೋಮಾ ಅರ್ಜಿ ನೋಂದಣಿ ಶುಲ್ಕವನ್ನು ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್ "ದಾಖಲೆಗಳ ಪರಿಶೀಲನಾ ಕೇಂದ್ರ"ಗಳಲ್ಲಿ ನಗದು ರೂಪದಲ್ಲಿ ಪಾವತಿಸುವ ಬಗ್ಗೆ.

**ಉಲ್ಲೇಖ:-** ಈ ಕಛೇರಿ ಸಮ ಸಂಖ್ಯೆ ಅಧಿಸೂಚನೆ ದಿ:05-05-2018.

-000000-

2018-19ನೇ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶ ಸಂಬಂಧ ಪ್ರವೇಶ ಬಯಸುವ ಅಭ್ಯರ್ಥಿಗಳು ಅರ್ಜಿ ನೋಂದಣಿ ಶುಲ್ಕವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಬ್ಯಾಂಕ್ ಖಾತೆಗೆ ಪಾವತಿಸಿ, ಬ್ಯಾಂಕ್ ಚಲನ್‌ನ್ನು ಪಡೆದು ಸಮೀಪವಿರುವ ಯಾವುದಾದರು ಒಂದು ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್ "ದಾಖಲೆಗಳ ಪರಿಶೀಲನಾ ಕೇಂದ್ರ"ದಲ್ಲಿ ಸಲ್ಲಿಸಲು ಉಲ್ಲೇಖಿತ ಪ್ರವೇಶಾಧಿಸೂಚನೆಯಲ್ಲಿ ಪ್ರಕಟಿಸಲಾಗಿತ್ತು. ಆದರೆ, ತಾಂತ್ರಿಕ ತೊಂದರೆಗಳಿಂದಾಗಿ ವಿದ್ಯಾರ್ಥಿಗಳು ಅರ್ಜಿ ನೋಂದಣಿ ಶುಲ್ಕವನ್ನು ಪಾವತಿಸಲು ಈ ಕೆಳಕಂಡಂತೆ ಬದಲಾವಣೆ ಮಾಡಲಾಗಿದೆ.

**ಅಭ್ಯರ್ಥಿಗಳು ಅರ್ಜಿ ನಮೂನೆ ಹಾಗೂ ಮಾಹಿತಿ ಪುಸ್ತಕವನ್ನು ತಾಂತ್ರಿಕ ಶಿಕ್ಷಣ ಇಲಾಖೆಯ www.dte.kar.nic.in ವೆಬ್‌ಸೈಟ್‌ನ ಮೂಲಕ ಡೌನ್‌ಲೋಡ್ ಮಾಡಿಕೊಂಡು ಡಿಪ್ಲೋಮಾ ಅರ್ಜಿ ನೋಂದಣಿ ಶುಲ್ಕವನ್ನು ಸಮೀಪವಿರುವ ಯಾವುದಾದರು ಒಂದು ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್ "ದಾಖಲೆಗಳ ಪರಿಶೀಲನಾ ಕೇಂದ್ರ"ದಲ್ಲಿ (ಸಾಮಾನ್ಯ/2ಎ/2ಬಿ/3ಎ/3ಬಿ = ₹ 100/- & ಪ.ಜಾ/ಪ.ಪಂ/ ಪ್ರವರ್ಗ-1 = ₹ 50/-) ನಗದು ರೂಪದಲ್ಲಿ ಪಾವತಿಸಲು ಅನುಮತಿ ನೀಡಲಾಗಿದೆ. ಉಳಿದಂತೆ, ಪ್ರವೇಶ ಪ್ರಕ್ರಿಯೆಯ ವಿಧಾನದಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.**

*ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರನ್ನು ಸಂಪರ್ಕಿಸುವುದು ಹಾಗೂ ಇಲಾಖೆಯ ವೆಬ್‌ಸೈಟ್ www.dte.kar.nic.in ನ್ನು ನೋಡುವುದು.*

ನಿರ್ದೇಶಕರು

23/05

**ಇವರಿಗೆ,**

*ರಾಜ್ಯದ ಎಲ್ಲಾ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳಿಗೆ - ಸದರಿ ಪ್ರಕಟಣೆಯನ್ನು ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಲು ಹಾಗೂ ಈ ಬಗ್ಗೆ ವಿದ್ಯಾರ್ಥಿಗಳ ಪೋಷಕರುಗಳ ಗಮನಕ್ಕೆ ತರಲು ಸೂಚಿಸಲಾಗಿದೆ.*